# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1011 |
| ವಿಧಾನ ಪರಿಷತ್ತ್ ಸದಸ್ಯರ ಹೆಸರು | : | ಶ್ರೀ ಜಗದೇವ್ ಗುತ್ತೇದಾರ್ (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | 12-03-2026 |
| ಉತ್ತರಿಸುವ ಸಚಿವರು | : | ಮಾನ್ಯ ಗೃಹ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| (ಅ) | ಅಗ್ನಿಶಾಮಕ ಇಲಾಖೆ ಪ್ರಾರಂಭವಾಗಿ 83 ವರ್ಷ ಕಳೆದರೂ ಇಲಾಖೆಯಲ್ಲಿ ಮಹಿಳೆಯರ ನೇಮಕಾತಿ ಮಾಡಿಕೊಳ್ಳದೇ ಇರುವುದು ನಿಜವೇ; ಇದ್ದಲ್ಲಿ ಅದಕ್ಕೆ ಕಾರಣಗಳೇನು; | ಕರ್ನಾಟಕ ರಾಜ್ಯ ಅಗ್ನಿಶಾಮಕ ಇಲಾಖೆಯಲ್ಲಿ ಲಿಪಿಕ ಹುದ್ದೆಗಳಿಗೆ ಮಹಿಳಾ ಉದ್ಯೋಗಿಗಳನ್ನು ಸಂಬಂಧಪಟ್ಟ ಪ್ರಾಧಿಕಾರಗಳಿಂದ ನೇಮಕಾತಿ ಮಾಡಿಕೊಳ್ಳಲಾಗಿರುತ್ತದೆ. ಆದರೆ ಕಾರ್ಯಕಾರಿ ಹುದ್ದೆಗಳಿಗೆ ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳಲ್ಲಿ ಅವಕಾಶಗಳನ್ನು ಕಲ್ಪಿಸಿರದ ಕಾರಣ ನೇಮಕಾತಿ ಮಾಡಿಕೊಂಡಿರುವುದಿಲ್ಲ. |
| (ಆ) | ಅಗ್ನಿಶಾಮಕ ಇಲಾಖೆಯಲ್ಲಿ ಮಹಿಳೆಯರಿಗೆ ಅವಕಾಶ ಕಲ್ಪಿಸುವ ಉದ್ದೇಶ ಸರ್ಕಾರಕ್ಕೆ ಇದೆಯೇ; | ಈಗಾಗಲೇ ಕರ್ನಾಟಕ ರಾಜ್ಯ ಅಗ್ನಿಶಾಮಕ ಮತ್ತು ತುರ್ತು ಸೇವೆಗಳ ಇಲಾಖೆ ನೇರ ನೇಮಕಾತಿಯಲ್ಲಿ ಕಾರ್ಯಕಾರಿ ಹುದ್ದೆಗಳಿಗೆ ಶೇಕಡಾ 10% ರಷ್ಟು ಮಹಿಳಾ ಪ್ರಾತಿನಿಧ್ಯತೆ ನೀಡಲು ಇಲಾಖಾ ಮಟ್ಟದಲ್ಲಿ ಉದ್ದೇಶಿಸಲಾಗಿದ್ದು, ಅದರಂತೆ ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಾವಳಿಗಳಲ್ಲಿ ಅವಕಾಶವನ್ನು ಕಲ್ಪಿಸುವ ಕುರಿತು ಇಲಾಖೆಯಿಂದ ಪ್ರಸ್ತಾವನೆಯು ಸ್ವೀಕೃತವಾಗಿದ್ದು, ಸರ್ಕಾರದ ಹಂತದಲ್ಲಿ ಪರಿಶೀಲನೆಯಲ್ಲಿರುತ್ತದೆ. |
| (ಇ) | ಇದ್ದರೆ ಯಾವ ಯಾವ ಹುದ್ದೆಗಳಲ್ಲಿ ಅವರನ್ನು ನೇಮಕ ಮಾಡಿಕೊಳ್ಳಲಾಗುವುದು ಮತ್ತು ಯಾವಾಗ ನೇಮಕ ಮಾಡಿಕೊಳ್ಳಲಾಗುವುದು? | |

ಸಂಖ್ಯೆ: ಹೆಚ್‌ಡಿ 55 ಎಸ್‌ಎಫ್‌ಬಿ 2026

(ಡಾ. ಜಿ. ಪರಮೇಶ್ವರ)
ಗೃಹ ಸಚಿವರು